ಆ) ಹಾಗಿದ್ದಲ್ಲಿ, ಅಂತಹ ರೈತರಿಗೆ ಸರ್ಕಾರದ ಪ್ರೋತ್ಸಾಹವೇನು:

ಇ) ಹಾಗಿದ್ದಲ್ಲಿ, ಪ್ರಾಮಾಣಿಕವಾಗಿ ಬಿಲ್ಲು ಪಾವತಿಸಿದ ರೈತರಿಗೆ ಮುಂದಿನ ಬಿಲ್ಲುಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವ ಆಲೋಚನೆ ಸರ್ಕಾರಕ್ಕೆ ಇದೆಯೇ?

ಶ್ರೀ ಹೆಚ್. ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಕೇವಲ ಅಲ ಸ್ವಲ್ಪ ನೀರಾವರಿ ಪಂಪುಸೆಟ್ಟು ಬಳಕೆದಾರರು ಮಾತ್ರ ಮಾರ್ಚ್ 2003 ರವರೆಗೆ ವಿದ್ಯುತ್ ಬಿಲ್ಲನ್ನು ಪಾವತಿ ಮಾಡಿರುತ್ತಾರೆ. ಬಹುತೇಕ ನೀರಾವರಿ ಪಂಪುಸೆಟ್ಟು ಬಳಕೆದಾರರು ಮಾರ್ಚ್ 2003ರ ಅಂತ್ಯದವರೆಗಿದ್ದ ವಿದ್ಯುತ್ ಬಾಕಿಯನ್ನು ಸರ್ಕಾರ ಸಂಪೂರ್ಣವಾಗಿ ಮನ್ನಾ ಮಾಡುತ್ತದೆಯೆಂದು ನಿರೀಕ್ಷಿಸಿ, ಪಾವತಿ ಮಾಡಿರಲಿಲ್ಲ.

ಅ) ಸರ್ಕಾರವು ದಿನಾಂಕ 21–2–2004 ರ ಆದೇಶದಲ್ಲಿ, ನೀರಾವರಿ ಪಂಪುಸೆಟ್ಟು ಬಳಕೆದಾರರ ದಿನಾಂಕ 31–3–2003ರ ಅಂತ್ಯದವರೆಗಿನ ವಿದ್ಯುತ್ ಬಾಕಿಯನ್ನು ಮನ್ನಾ ಮಾಡಿರುತ್ತದೆ. ಸರ್ಕಾರದ ಈ ಆದೇಶದ ಪ್ರಕಾರ

31–3–2003ರ ಅಂತ್ಯದವರೆಗಿನ ಬಾಕಿಯನ್ನು ಒಂದು ವೇಳೆ 1–4–2003 ಮತ್ತು ತದನಂತರದಲ್ಲಿ ಪಾವತಿ ಮಾಡಿದ್ದಲ್ಲಿ ಅಂತಹ ನೀರಾವರಿ ಪಂಪುಸೆಟ್ಟು ಗ್ರಾಹಕರಿಗೆ ಮಾತ್ರ ಪಾವತಿಸಲಾದ ಹಣವನ್ನು 2003–04 ರ ವಿದ್ಯುತ್ ಬಿಲ್ಲುಗಳಲ್ಲಿ ಹೊಂದಾಣಿಕೆ ಮಾಡಿಕೊಡಲಾಗುತ್ತದೆ.

ಇ) ಸರ್ಕಾರದ ಮುಂದೆ ಇಂತಹ ಪ್ರಸ್ತಾವನೆಗಳು ಇರುವುದಿಲ್ಲ.

851(1595) ಶ್ರೀ ಸಿಂಧೂರ ರಾಜಶೇಖರ (ಶಿಗ್ಗಾಂವ್): ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸವಣೂರ ತಾಲ್ಲೂಕಿನ ಚಿಕ್ಕಮರಳೀಹಳ್ಳಿ ಹತ್ತಿರ 270 ಎಕರೆ ಅರಣ್ಯ ಭೂಮಿಯಲ್ಲಿ ಕೆರೆ ಸಹ ಇರುವುದು ಸರ್ಕಾರದ ಗಮನಕ್ಕೆ ಇದೆಯೇ;

ಆ) ಬಂದಿದ್ದಲ್ಲಿ, ಅಭಿವೃದ್ಧಿ ಮಾಡದೇ ಇರಲು ಕಾರಣವೇನು;

ಇ) ಇಷ್ಟು ದೊಡ್ಡ ಪ್ರಮಾಣದ ಅರಣ್ಯ ಜಮೀನನ್ನು ಅಭಿವೃದ್ಧಿ ಪಡಿಸದ ಅಧಿಕಾರಿಗಳ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದ.

ಈ) ಹಾಗಿದ್ದಲ್ಲಿ, ಅಭಿವೃದ್ಧಿ ಮಾಡಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ?

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಹೌದು

ಆ) ಸದರಿ ಅರಣ್ಯ ಪ್ರದೇಶದಲ್ಲಿ ಜೆ.ಬಿ.ಐ.ಸಿ. ಯೋಜನೆ (ಮಾದರಿ–03) ರಡಿ 1998–99 ನೇ ಸಾಲಿನಲ್ಲಿ (102 ಹೆ.) ಮತ್ತು 1999–00 ನೇ ಸಾಲಿನಲ್ಲಿ (140 ಹೆ.) ನೆಡುತೋಪು ಬೆಳೆಸಿ ಅಭಿವೃದ್ಧಿಪಡಿಸಲಾಗಿರುತ್ತದೆ.

ಇದರಿಂದಾಗಿ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

852(1596) ಶ್ರೀ ಸಿಂಧೂರ ರಾಜಶೇಖರ (ಶಿಗ್ಗಾಂವ್): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?